1

ಕರ್ನಾಟಕ ಸರ್ಕಾರ
**ಸಮಗ್ರ ಮಕ್ಕಳ ರಕ್ಷಣಾ ಯೋಜನೆ**
**C/o , ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಂದನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು-01.**
E-Mail Id:icps.kar@gmail.com Ph:080-22879381/82/83

ಸಂಖ್ಯೆ:ನಿಸಮರಯೋ/ಆಡಳಿತ/CDPO/ತಾ.ಮ.ಅ-46/2020-21 ದಿನಾಂಕ:19-06-2020

ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಎಲ್ಲಾ 30 ಜಿಲ್ಲೆಗಳು.

ಮಾನ್ಯರೆ,

ವಿಷಯ: ತಾಲ್ಲೂಕು ಮಟ್ಟದಲ್ಲಿ ಮಕ್ಕಳ ಹಕ್ಕುಗಳು ಮತ್ತು ರಕ್ಷಣೆಯ ಕಾರ್ಯವನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು(CDPO)ಗಳು ನಿರ್ವಹಿಸುವ ಕುರಿತು.
ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ: ಮಮಇ 72 ಮಭಾಬ 2020, ಬೆಂಗಳೂರು, ದಿನಾಂಕ:02.06.2020.

*******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದ ಆದೇಶದಲ್ಲಿ, ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಯಾವ ರೀತಿಯಾಗಿ ಮಕ್ಕಳ ಹಕ್ಕುಗಳು ಮತ್ತು ರಕ್ಷಣೆಯ ಕಾರ್ಯವನ್ನು ನಿರ್ವಹಿಸುವರೋ, ಅದೇ ರೀತಿಯಲ್ಲಿ ಆಯಾ ತಾಲ್ಲೂಕಿನಲ್ಲಿ ಶಿಶು ಅಭಿವೃದ್ಧಿ ರಕ್ಷಣಾಧಿಕಾರಿ(CDPO)ಗಳು ತಾಲ್ಲೂಕು ಹಂತದಲ್ಲಿ ಹೆಚ್ಚುವರಿಯಾಗಿ ಕಾರ್ಯನಿರ್ವಹಿಸುವಂತೆ ಆದೇಶಿಸಲಾಗಿರುತ್ತದೆ.

ಸದರಿ ಸರ್ಕಾರದ ಆದೇಶದ ಪ್ರತಿಯನ್ನು ಈ ಪತ್ರದೊಂದಿಗೆ ರವಾನಿಸುತ್ತಾ ಇದನ್ನು ಅನುಷ್ಠಾನಗೊಳಿಸಲು ಅಗತ್ಯ ಕ್ರಮವಹಿಸಲು ಕೋರಿದೆ.

ತಮ್ಮ ವಿಶ್ವಾಸಿ,
19.06.2020
ನಿರ್ದೇಶಕರು,
ಸಮಗ್ರ ಮಕ್ಕಳ ರಕ್ಷಣಾ ಯೋಜನೆ,
ಬೆಂಗಳೂರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕ
3245
ದಿನಾಂಕ: 13/7/20
ಕೊಪ್ಪಳ

ಪ್ರತಿಯನ್ನು:

1. ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರಿಗೆ ಮಾಹಿತಿಗಾಗಿ.
2. ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರಿಗೆ ಮಾಹಿತಿಗಾಗಿ.
3. ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಇವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.

"ಪ್ರತಿಗಳನ್ನು ಸಂಬಂಧಿಸಿದ ಎಲ್ಲಾ ಅಧಿಕಾರಿಗಳಿಗೆ [illegible] ತಿಳಿಸುವುದು"

## No.WCDSEC-SBB/82/2020-WCD-SEC D-WOMEN AND CHILD WELFARE SEC

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮಕ್ಕಳ ಹಕ್ಕುಗಳು ಮತ್ತು ರಕ್ಷಣೆಯ ಕಾರ್ಯವನ್ನು ನಿರ್ವಹಿಸಲು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಹುದ್ದೆಗಳಿರುವಂತೆ ತಾಲ್ಲೂಕಾ ಮಟ್ಟದಲ್ಲಿ ಮಕ್ಕಳ ಹಕ್ಕುಗಳು ಮತ್ತು ರಕ್ಷಣೆಯ ಕಾರ್ಯವನ್ನು ನಿರ್ವಹಿಸಲು ಆಯಾ ತಾಲ್ಲೂಕಿನಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ(CDPO) ಗಳು ತಾಲ್ಲೂಕು ಹಂತದಲ್ಲಿ ಕಾರ್ಯ ನಿರ್ವಹಿಸುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ:ಮಮಇ 255 ಮಭಾಬ 2016 ದಿನಾಂಕ:06.09.2019.

ಪ್ರಸ್ತಾವನೆ:

ಮೇಲೆ ಓದಲಾದ ಸರ್ಕಾರದ ಆದೇಶ ಸಂಖ್ಯೆ:ಮಮಇ 255 ಮಭಾಬ 2016 ದಿನಾಂಕ:06.09.2019ರಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಮಗ್ರ ಮಕ್ಕಳ ರಕ್ಷಣಾ ಯೋಜನೆ(ಐಸಿಪಿಎಸ್)ಯಡಿಯಲ್ಲಿ ಪತ್ರಾಂಕಿತ 26 ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಹುದ್ದೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ನಿವೃತ್ತರಾಗುವ ಪತ್ರಾಂಕಿತ ಅಧಿಕಾರಿಗಳನ್ನು ಒಂದು ವರ್ಷದ ಅವಧಿಗೆ ಕೆಸಿಎಸ್ ಆರ್ ನಿಯಮ 313(ಬಿಬಿ) ರನ್ವಯ ನೇಮಕಾತಿ ಮಾಡಲು ಕೆಲವು ಷರತ್ತುಗಳನ್ನು ವಿಧಿಸಿ, ಮಂಜೂರಾತಿ ನೀಡಲಾಗಿರುತ್ತದೆ.

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮಕ್ಕಳ ಹಕ್ಕುಗಳು ಮತ್ತು ರಕ್ಷಣೆಯ ಕಾರ್ಯವನ್ನು ನಿರ್ವಹಿಸಲು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಹುದ್ದೆಗಳಿರುವಂತೆ ತಾಲ್ಲೂಕಾ ಮಟ್ಟದಲ್ಲಿ ಮಕ್ಕಳ ಹಕ್ಕುಗಳು ಮತ್ತು ರಕ್ಷಣೆಯ ಕಾರ್ಯವನ್ನು ನಿರ್ವಹಿಸಲು ತಾಲ್ಲೂಕಾ ಮಕ್ಕಳ ರಕ್ಷಣಾಧಿಕಾರಿ ಹುದ್ದೆಗಳು ಸೃಜನೆಯಾಗದಿರುವುದರಿಂದ, ಮಕ್ಕಳ ಹಕ್ಕುಗಳು ಮತ್ತು ರಕ್ಷಣೆಯ ಕಾರ್ಯವನ್ನು ನಿರ್ವಹಿಸುವಲ್ಲಿ ಅಡೆ ತಡೆಯುಂಟಾಗುತ್ತಿದೆ,

ಇದರಿಂದಾಗಿ ಮಕ್ಕಳ ರಕ್ಷಣೆ ಹಾಗೂ ಪೋಷಣೆಗೆ ಹಿನ್ನೆಡೆಯಾಗುವುದನ್ನು ಗಮನಿಸಲಾಗಿದ್ದು, ಮಕ್ಕಳ ಸರ್ವತೋಮುಖ ಬೆಳವಣಿಗೆ ಅಂಶಗಳ ಹಿನ್ನಲೆಯಲ್ಲಿ, ತಾಲ್ಲೂಕಾ ಮಟ್ಟದಲ್ಲಿ ಮಕ್ಕಳ ಹಕ್ಕುಗಳು ಮತ್ತು ರಕ್ಷಣೆಯ ಕಾರ್ಯವನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಯಾವ ರೀತಿಯಾಗಿ ಕಾರ್ಯವನ್ನು ನಿರ್ವಹಿಸುವರೋ, ಅದೇ ರೀತಿಯಲ್ಲಿ ಆಯಾ ತಾಲ್ಲೂಕಿನಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ(CDPO) ಗಳು ತಾಲ್ಲೂಕು ಹಂತದಲ್ಲಿ ಕಾರ್ಯ ನಿರ್ವಹಿಸುವ ಬಗ್ಗೆ ಹೆಚ್ಚುವರಿಯಾಗಿ ಕಾರ್ಯ ನಿರ್ವಹಿಸುವ ಬಗ್ಗೆ ಪ್ರಸ್ತಾಪಿಸಲಾಗಿರುತ್ತದೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ

**ಸರ್ಕಾರಿ ಆದೇಶ ಸಂಖ್ಯೆ: ಮಮಇ 72 ಮಭಾಬ 2020, ಬೆಂಗಳೂರು, ದಿನಾಂಕ: 02.06.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮಕ್ಕಳ ಹಕ್ಕುಗಳು ಮತ್ತು ರಕ್ಷಣೆಯ ಕಾರ್ಯವನ್ನು ನಿರ್ವಹಿಸಲು ಹಾಗೂ ಮಕ್ಕಳ ಸರ್ವತೋಮುಖ ಬೆಳವಣಿಗೆ ಅಂಶಗಳನ್ನು ಗಮನಿಸಿ, ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಯಾವ ರೀತಿಯಾಗಿ ಮಕ್ಕಳ ಹಕ್ಕುಗಳು ಮತ್ತು ರಕ್ಷಣೆಯ ಕಾರ್ಯವನ್ನು ನಿರ್ವಹಿಸುವರೋ, ಅದೇ ರೀತಿಯಲ್ಲಿ ಆಯಾ ತಾಲ್ಲೂಕಿನಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ(CDPO) ಗಳು ತಾಲ್ಲೂಕು ಹಂತದಲ್ಲಿ ಹೆಚ್ಚುವರಿಯಾಗಿ ಕಾರ್ಯ ನಿರ್ವಹಿಸುವಂತೆ ಆದೇಶಿಸಿದೆ.

2..

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ:ಮಮಇ 255 ಮಭಾಬ 2016 ದಿನಾಂಕ:06.09.2019ರಲ್ಲಿ ವಿಧಿಸಲಾಗಿರುವ ಷರತ್ತುಗಳನ್ನು ತಾಲ್ಲೂಕಾ ಹಂತದಲ್ಲಿ ಅನ್ವಯಿಸುವಂತೆ ಕಡ್ಡಾಯವಾಗಿ ಪಾಲಿಸಲು ಆದೇಶಿಸಿದೆ.

ಈ ಆದೇಶವನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

2/6/20
(ವಿ. ಭಾಗ್ಯಲಕ್ಷ್ಮಿ)
**ಸರ್ಕಾರದ ಅಧೀನ ಕಾರ್ಯದರ್ಶಿ-3**
ಮಹಿಳಾ ಮತ್ತು ಮಕ್ಕಳ ಅಭಿವದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ(ಡಿ ಶಾಖೆ

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಸಮಗ್ರ ಮಕ್ಕಳ ರಕ್ಷಣಾ ಯೋಜನೆ, ಬೆಂಗಳೂರು
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು
6. ನಿರ್ದೇಶಕರು/ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನ ಸೌಧ, ಬೆಂಗಳೂರು.
9. ಉಪನಿರ್ದೇಶಕರು, ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು.
10. ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು.
11. ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿ(CDPO) ಗಳು.
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ,ವಿಕಾಸ ಸೌಧ, ಬೆಂಗಳೂರು
14. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.